# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 321
ಸದಸ್ಯರ ಹೆಸರು : ಡಾ: ಎಂ.ಜಿ.ಮುಳೆ (ವಿಧಾನ ಸಭಾ ಕ್ಷೇತ್ರ)
ಉತ್ತರಿಸುವ ದಿನಾಂಕ : 06.03.2025
ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆಯ ಕಾರಂಜಾ ಯೋಜನೆ ಪ್ರಾರಂಭವಾಗಿ ಹಲವು ವರ್ಷಗಳು ಕಳೆದರೂ ಸಂತ್ರಸ್ಥ ರೈತರಿಗೆ ಇನ್ನೂ ನ್ಯಾಯ ಸಿಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕಾರಂಜಾ ಯೋಜನೆ ಅಡಿಯಲ್ಲಿ ಒಟ್ಟು 24,664 ಎಕರೆ 27 ಗುಂಟೆ ಭೂಸ್ವಾಧೀನವಾಗಿರುತ್ತದೆ. ಭೂಸ್ವಾಧೀನಗೊಂಡ ಜಮೀನುಗಳಿಗೆ ಭೂಸ್ವಾಧೀನ ಕಾಯ್ದೆಯಂತೆ ಇತರೆ ಶಾಸನಬದ್ಧ ಸೌಲಭ್ಯಗಳನ್ನು ಸೇರಿಸಿ ಸಂಪೂರ್ಣ ಪರಿಹಾರ ಧನವನ್ನು ಪಾವತಿಸಲಾಗಿದೆ.<br><br>ಮುಂದುವರೆದು, ಭೂ-ಮಾಲೀಕರು ಹೆಚ್ಚುವರಿ ಪರಿಹಾರ ಕೋರಿ ಸಿವಿಲ್ ನ್ಯಾಯಾಲಯಗಳಲ್ಲಿ ದಾಖಲಿಸಿದ ಒಟ್ಟು 1929 ಅರ್ಜಿಗಳಲ್ಲಿ ಮಾನ್ಯ ನ್ಯಾಯಾಲಯ ನೀಡಿರುವ ಆದೇಶದನ್ವಯ ಪರಿಹಾರವನ್ನು ಪಾವತಿಸಲಾಗಿರುತ್ತದೆ. |
| ಆ. | ಭೂಮಿ ಕಳೆದುಕೊಂಡ ರೈತರಿಗೆ ಸಿಗಬೇಕಾದ ಪರಿಹಾರ ಧನ ಸಿಗದೆ ತೊಂದರೆಗೊಳಗಾಗಿದ್ದು ತ್ವರಿತ ಕ್ರಮಗಳನ್ನು ಸರ್ಕಾರ ಕೈಗೊಳ್ಳದಿರಲು ಕಾರಣಗಳೇನು; | |
| ಇ. | ಭೂಮಿ ಕಳೆದುಕೊಂಡ ರೈತರಿಗೆ ಮಾನವೀಯತೆ ದೃಷ್ಟಿಯಿಂದ ವೈಜ್ಞಾನಿಕ ಮಾನದಂಡ ಆಧರಿಸಿ ವಿಶೇಷ ಪ್ಯಾಕೇಜ್ ನೀಡಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳಲಾಗುವುದೇ; ಯಾವ ಕಾಲಮಿತಿಯಲ್ಲಿ ಸಂತ್ರಸ್ಥ ರೈತರಿಗೆ ಪರಿಹಾರ ನೀಡಿ ನ್ಯಾಯ ದೊರಕಿಸಿಕೊಡಲಾಗುವುದು; | ಮಾನ್ಯ ಮುಖ್ಯಮಂತ್ರಿಯವರು ದಿನಾಂಕ:19.12.2024ರಂದು ಬೆಳಗಾವಿಯ ಸುವರ್ಣ ಸೌಧದಲ್ಲಿ ಕಾರಂಜಾ ಜಲಾಶಯ ಯೋಜನೆಯ ಮುಳುಗಡೆ ಪ್ರದೇಶದ ಸಂತ್ರಸ್ಥರ ಸಮಸ್ಯೆಗಳ ಬಗ್ಗೆ ಚರ್ಚಿಸಲು ನಡೆದ ಸಭೆಯಲ್ಲಿ ಸೂಚಿಸಿರುವಂತೆ ಕಾರಂಜಾ ಮುಳುಗಡೆ ಸಂತ್ರಸ್ಥರ ಬೇಡಿಕೆಗಳನ್ನು ಪರಿಶೀಲಿಸುವ ಸಂಬಂಧದಲ್ಲಿ ಒಂದು ಸಮಿತಿಯನ್ನು ರಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |

ಜಸಂಇ 18 ಎಂಎಲ್ಎ 2025

(ಡಿ.ಕೆ.ಶಿವಕುಮಾರ್)
ಉಪ ಮುಖ್ಯಮಂತ್ರಿ